ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1006 |
| ಮಾನ್ಯ ವಿಧಾನ ಪರಿಷತ್ತು ಸದಸ್ಯರ ಹೆಸರು | : | ಶ್ರೀ ಜಗದೇವ್ ಗುತ್ತೇದಾರ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 15.12.2025 |
| ಉತ್ತರಿಸುವ ಸಚಿವರು | : | ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಆಪರೇಷನ್ ಬಿಪಿಎಲ್ ಹೆಸರಿನಡಿ ರಾಜ್ಯಾದ್ಯಂತ ರದ್ದುಪಡಿಸಿರುವ ಬಿಪಿಎಲ್ ಕಾರ್ಡ್‌ಗಳೆಷ್ಟು; | ಕೇಂದ್ರ ಸರ್ಕಾರದಿಂದ ಈ ಕೆಳಕಂಡ ವಿಧಗಳಲ್ಲಿ 7,76,206 ಶಂಕಾಸ್ಪದ ಪಡಿತರ ಫಲಾನುಭವಿಗಳನ್ನು ಗುರುತಿಸಲಾಗಿರುತ್ತದೆ<br>1. CBDT Income Group Annual Income > 1,20,000<br>2. GSTN Gross Turnover >25 Lacs<br>3. MCA Individual as Director<br>4. PDS Duplicate RC Inter State<br>5. PDS Duplicate RC Intra State<br>6. PDS RC Member Above 100 Years<br>7. PDS Silent RC >12 Months<br>8. PDS Silent RC 6-12 Months<br>9. PDS Single Member Below 18 Years<br>10. PM KISAN Land Holding >7.5 Acres<br>11. UIDAI Aadhaar Status Deceased<br>12. Vehicle Ownership value Owning LIGHT MOTOR VEHICLE<br>13. Vehicle Ownership value Owning MEDIUM MOTOR VEHICLE<br>14. Vehicle Ownership value Owning OTHER THAN MENTIONED ABOVE<br>ರಾಜ್ಯದಲ್ಲಿ ಆದ್ಯತಾ ಪಡಿತರ ಚೀಟಿಗಳನ್ನು ಪಡೆಯುವ ಬಗ್ಗೆ ಸರ್ಕಾರವು 2017 ರಲ್ಲಿ ಈ ಕೆಳಕಂಡಂತೆ ಹೊರಗಿಡುವ ಮಾನದಂಡಗಳನ್ನು ರೂಪಿಸಿದೆ.<br>1. ವೇತನವನ್ನು ಗಣನೆಗೆ ತೆಗೆದುಕೊಳ್ಳದೆ ಎಲ್ಲಾ ಖಾಯಂ ನೌಕರರು ಅಂದರೆ ಸರ್ಕಾರದ ಅಥವಾ ಸರ್ಕಾರದಿಂದ ಅನುದಾನವನ್ನು ಪಡೆಯುತ್ತಿರುವ ಸಂಸ್ಥೆಗಳು ಅಥವಾ ಸರ್ಕಾರ ಪ್ರಾಯೋಜಿತ ಸರ್ಕಾರಿ ಸಮಾನ ಸಂಸ್ಥೆಗಳು, ಮಂಡಳಿಗಳು ನಿಗಮಗಳು/ ಸ್ವಾಯತ್ತ ಸಂಸ್ಥೆಗಳು ಇತ್ಯಾದಿ ಒಳಗೊಂಡಂತೆ ಆದಾಯ ತೆರಿಗೆ/ಸೇವಾ ತೆರಿಗೆ/ ಜಿ.ಎಸ್.ಟಿ/ವೃತ್ತಿ ತೆರಿಗೆ ಪಾವತಿಸುವ ಎಲ್ಲಾ ಕುಟುಂಬಗಳು<br>2. ಗ್ರಾಮೀಣ ಪ್ರದೇಶಗಳಲ್ಲಿ 03 ಹೆಕ್ಟೇರ್ ಒಣಭೂಮಿ ಅಥವಾ |

| | |
|---|---|
| | ತತ್ಸಮಾನ ನೀರಾವರಿ ಭೂಮಿ ಹೊಂದಿರುವ ಕುಟುಂಬಗಳು ಅಥವಾ ಗ್ರಾಮೀಣ ಪ್ರದೇಶವನ್ನು ಹೊರತುಪಡಿಸಿ ನಗರ ಪ್ರದೇಶಗಳಲ್ಲಿ 1000 ಚದರ ಅಡಿಗಿಂತಲೂ ಹೆಚ್ಚಿನ ವಿಸ್ತೀರ್ಣದ ಪಕ್ಕಾ ಮನೆಯನ್ನು ಸ್ವಂತವಾಗಿ ಹೊಂದಿರುವ ಕುಟುಂಬಗಳು.<br>3. ಜೀವನೋಪಾಯಕ್ಕಾಗಿ ಸ್ವತಃ ಓಡಿಸುವ ಒಂದು ವಾಣಿಜ್ಯ ವಾಹನವನ್ನು ಅಂದರೆ ಟ್ರಾಕ್ಟರ್, ಮ್ಯಾಕ್ಸಿಕ್ಯಾಬ್, ಟ್ಯಾಕ್ಸಿ ಇತ್ಯಾದಿಗಳನ್ನು ಹೊಂದಿದ ಕುಟುಂಬವನ್ನು ಹೊರತುಪಡಿಸಿ ನಾಲ್ಕು ಚಕ್ರದ ವಾಹನಗಳನ್ನು ಹೊಂದಿರುವ ಎಲ್ಲಾ ಕುಟುಂಬಗಳು.<br>4. ಕುಟುಂಬದ ವಾರ್ಷಿಕ ಆದಾಯವು ರೂ. 1.20 ಲಕ್ಷಗಳಿಗಿಂತಲೂ ಹೆಚ್ಚು ಇರುವ ಕುಟುಂಬಗಳು.<br>ಸದರಿ ಮಾನದಂಡಗಳ ವಿರುದ್ಧವಾಗಿ ಪಡೆದಿರುವ ಆದ್ಯತಾ ಪಡಿತರ ಚೀಟಿಗಳನ್ನು ಪತ್ತೆಹಚ್ಚಿ ಸದರಿ ಪಡಿತರ ಚೀಟಿಗಳನ್ನು ಆದ್ಯತೇತರ ಪಡಿತರ ಚೀಟಿಗಳನ್ನಾಗಿ ಪರಿವರ್ತಿಸಲು ಕ್ರಮವಹಿಸಲಾಗಿರುತ್ತದೆ.<br><br>ರಾಜ್ಯದಲ್ಲಿ **2025-26 ನೇ ಸಾಲಿನಲ್ಲಿ ಒಟ್ಟು 56,324 ಅನರ್ಹ ಆದ್ಯತಾ ಪಡಿತರ ಚೀಟಿಗಳನ್ನು ರದ್ದುಪಡಿಸಲಾಗಿರುತ್ತದೆ.** |
| ಆ ಅಕ್ರಮ ಬಿಪಿಎಲ್ ಕಾರ್ಡ್‌ಗಳನ್ನು ಪಡೆದು ಸರ್ಕಾರದ ಪಡಿತರ ಯೋಜನೆಯ ಲಾಭ ಪಡೆದುಕೊಂಡು ಫಲಾನುಭವಿಗಳಿಗೆ ದಂಡ ವಿಧಿಸಲು ಯಾವ ನಿಯಮಾವಳಿಗಳನ್ನು ರೂಪಿಸಲಾಗಿದೆ; | ಸರ್ಕಾರಿ ನೌಕರರು ಹಾಗೂ ಅರೆ ಸರ್ಕಾರಿ ನೌಕರರು ಆದ್ಯತಾ ಪಡಿತರ ಚೀಟಿಯನ್ನು ಹೊಂದಿದಲ್ಲಿ ಅಂತಹ ಪಡಿತರ ಚೀಟಿದಾರರಿಂದ ದಂಡ ವಸೂಲಾತಿಗೆ ಕ್ರಮವಹಿಸಲಾಗಿರುತ್ತದೆ. |
| ಇ ಸದರಿ ನಿಯಮಾವಳಿಗಳ ಪ್ರಕಾರ ವಸೂಲಾದ ದಂಡದ ಮೊತ್ತ ಎಷ್ಟು; | ಅಕ್ರಮ ಬಿಪಿಎಲ್ ಕಾರ್ಡ್‌ಗಳನ್ನು ಪಡೆದು ಸರ್ಕಾರದ ಪಡಿತರ ಯೋಜನೆಯ ಲಾಭ ಪಡೆದುಕೊಂಡು ಫಲಾನುಭವಿಗಳಿಂದ ದಂಡವನ್ನು ವಸೂಲಿ ಮಾಡಿದ್ದು **2025-26ನೇ ಸಾಲಿನಲ್ಲಿ ರೂ. 25,64,211** ದಂಡವನ್ನು ವಸೂಲಾತಿ ಮಾಡಲಾಗಿರುತ್ತದೆ. |
| ಈ ಅರ್ಹ ಬಿಪಿಎಲ್ ಕಾರ್ಡ್‌ಗಳನ್ನು ಹೊಂದಿದವರಿಗೂ ಅನರ್ಹ ಬಿಪಿಎಲ್ ಕಾರ್ಡ್‌ದಾರರು ಎಂದು ಗುರುತಿಸಲಾಗಿದೆಯೇ; | ಕೇಂದ್ರ ಸರ್ಕಾರದ ನಿರ್ದೇಶನ ಮತ್ತು ರಾಜ್ಯ ಸರ್ಕಾರದ ಹೊರಗಿಡುವ ಮಾನದಂಡಗಳನ್ವಯ ಅನರ್ಹ ಪಡಿತರ ಚೀಟಿಗಳನ್ನು ಆದ್ಯತೇತರ ಗುರುತಿಸಿ ಚೀಟಿಗಳನ್ನಾಗಿ ಪರಿವರ್ತಿಸಲಾಗುತ್ತಿದೆ. |
| ಉ ಹಾಗಿದ್ದಲ್ಲಿ, ಅಂತಹ ಕಾರ್ಡ್‌ದಾರರಿಗೆ ಪುನಃ ಬಿಪಿಎಲ್ ಕಾರ್ಡ್ ನೀಡಲಾಗುವುದೇ? | ಆದಾಗ್ಯೂ ಈ ರೀತಿ ತಾತ್ಕಾಲಿಕವಾಗಿ ಆದ್ಯತೇತರ ಪಡಿತರ ಚೀಟಿಯನ್ನಾಗಿ (NPHH) ಪರಿವರ್ತಿಸಲಾದ ಪಡಿತರ ಚೀಟಿದಾರರು ಆದ್ಯತಾ ಚೀಟಿ ಹೊಂದಲು (PHH) ಅರ್ಹರಾಗಿದ್ದಲ್ಲಿ 45 ದಿನದೊಳಗಾಗಿ ಅಗತ್ಯ ದಾಖಲೆಗಳೊಂದಿಗೆ ಸಂಬಂಧ ಪಟ್ಟ ತಾಲ್ಲೂಕಿನ ತಹಶೀಲ್ದಾರ್‌ಗೆ ಮನವಿ ಸಲ್ಲಿಸಿದಲ್ಲಿ ಸದರಿ ಮನವಿಯನ್ನು ನಿಯಮಾನುಸಾರ ಪರಿಶೀಲಿಸಿ ಆದ್ಯತಾ ಪಡಿತರ ಚೀಟಿ ಹೊಂದಲು ಅರ್ಹರಿದ್ದಲ್ಲಿ ಅಂತಹವರ ಆದ್ಯತಾ ಪಡಿತರ ಚೀಟಿಯನ್ನು (PHH) |

| | | |
|---|---|---|
| | | ಮರುಸ್ಥಾಪಿಸಲು ಕ್ರಮವಹಿಸಲಾಗುತ್ತದೆ.<br>ಅದರಂತೆ ಒಂದು ವೇಳೆ ಅರ್ಹ ಫಲಾನುಭವಿಯ ಆದ್ಯತಾ ಪಡಿತರ ಚೀಟಿಯನ್ನು ರದ್ದುಪಡಿಸಿದಲ್ಲಿ, ಸಂಬಂಧಪಟ್ಟ ತಹಶೀಲ್ದಾರ್‌ಗೆ ಮನವಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. |

ಇ-ಆನಾಸ **336** ಡಿಆರ್‌ಎ **2025**

(ಕೆ.ಹೆಚ್. ಮುನಿಯಪ್ಪ)
ಆಹಾರ, ನಾಗರಿಕ ಸರಬರಾಜು ಮತ್ತು
ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು
ಮಾಪನಶಾಸ್ತ್ರ ಇಲಾಖಾ ಸಚಿವರು